# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 830(884) |
| ಸದಸ್ಯರ ಹೆಸರು | ಶ್ರೀ ರಾಮೋಜಿಗೌಡ (ಪದವಿಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | 11.03.2026 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ಜಿಲ್ಲೆಯ ಜಿಲ್ಲಾಧಿಕಾರಿ ಮತ್ತು ಎಸಿ ಕಚೇರಿಗಳಲ್ಲಿ ಎಷ್ಟು ಭೂ ಪರಿವರ್ತನೆ ಮತ್ತು ಕಂದಾಯ ಸಂಬಂಧಿತ ಅರ್ಜಿಗಳು ಬಾಕಿ ಇವೆ: (ಮಾಹಿತಿ ನೀಡುವುದು) | ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಸ್ತುತ ಭೂ ಪರಿವರ್ತನೆಗೆ ಸಂಬಂಧಿಸಿದಂತೆ ಯಾವುದೇ ಮನವಿಗಳು ಬಾಕಿ ಇರುವುದಿಲ್ಲ. ಕಂದಾಯ ಸಂಬಂಧಿತ ಬಾಕಿ ಇರುವ ಅರ್ಜಿಗಳ ಮಾಹಿತಿಯನ್ನು ಈ ಕೆಳಕಂಡಂತೆ ನಮೂದಿಸಲಾಗಿದೆ.<br><br>ತಾಲ್ಲೂಕು – ಮನವಿಗಳು<br>ಬೆಂ ಉತ್ತರ ತಾಲ್ಲೂಕು – 40<br>ಬೆಂಗಳೂರು ದಕ್ಷಿಣ ತಾಲ್ಲೂಕು – 38<br>ಬೆಂ.ಪೂರ್ವ ತಾಲ್ಲೂಕು – 35<br>ಯಲಹಂಕ – 50<br>ಆನೇಕಲ್ – 24<br>ಒಟ್ಟು – 203 |
| ಆ. | ಜಾತಿ ಆದಾಯ ಮತ್ತು ನಿವಾಸ ಪ್ರಮಾಣ ಪತ್ರ ಅರ್ಜಿಗಳನ್ನು ವಿಲೇವಾರಿ ಮಾಡಲು ತೆಗೆದುಕೊಳ್ಳುವ ಸರಾಸರಿ ಸಮಯ ಎಷ್ಟು; | ಜಾತಿ ಮತ್ತು ನಿವಾಸ ಪ್ರಮಾಣ ಪತ್ರಗಳ ಕುರಿತಾದ ಮನವಿಗಳನ್ನು ಸಕಾಲ ಯೋಜನೆಯಡಿಯಲ್ಲಿ ಸಂಬಂಧಪಟ್ಟ ಕಛೇರಿಯಿಂದ ತಾಂತ್ರಾಂಶದಲ್ಲಿ ನಿಗಧಿತ ಅವಧಿಯಲ್ಲಿ ವಿಲೇವಾರಿ ತಾಲ್ಲೂಕು ಮಾಡಲಾಗುತ್ತಿರುತ್ತದೆ. |
| ಇ. | ಖಾತ ವರ್ಗಾವಣೆ ಮತ್ತು ಭೂ ದಾಖಲೆ ನವೀಕರಣಗಳಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದಲ್ಲಿ ಸರಿಪಡಿಸಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ; (ಮಾಹಿತಿ ನೀಡುವುದು) | ಖಾತೆ ವರ್ಗಾವಣೆ ಮತ್ತು ಭೂದಾಖಲೆಗಳ ನವೀಕರಣಗಳಿಗೆ ಸಂಬಂಧಿಸಿದಂತೆ ಪೌತಿ ಆಂದೋಲನ ಕಾರ್ಯಕ್ರಮದ ಮೂಲಕ ಹಾಗೂ ಸ್ವಯಂ ಚಾಲಿತ ಮ್ಯುಟೇಶನ್ ಮೂಲಕ ತ್ವರಿತಗತಿಯಲ್ಲಿ ಕ್ರಮ ಕೈಗೊಳ್ಳಲಾಗುತ್ತಿರುತ್ತದೆ. |
| ಈ | ಡಿ.ಸಿ ಮತ್ತು ಎಸಿ ಕಚೇರಿಗಳಲ್ಲಿ ಭ್ರಷ್ಟಾಚಾರ ಮತ್ತು ಮಧ್ಯವರ್ತಿಗಳ ಹಸ್ತಕ್ಷೇಪವನ್ನು ತಡೆಯಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; | ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿ ಕಾರ್ಯಾಲಯದಲ್ಲಿ ಎಲ್ಲಾ ಪತ್ರ ವ್ಯವಹಾರಗಳನ್ನು ಇ-ಆಫೀಸ್ ತಂತ್ರಾಂಶದ ಮೂಲಕ, -ಪಹಣಿ ತಿದ್ದುಪಡಿ ತಂತ್ರಾಂಶ ಹಾಗೂ ನ್ಯಾಯಾಲಯದ ಕಲಾಪಗಳನ್ನು RCCMS ತಂತ್ರಾಂಶದ ಮೂಲಕವೇ ನಿರ್ವಹಣೆ ಮಾಡಲಾಗುತ್ತಿದ್ದು, ಯಾವುದೇ ಹಂತದಲ್ಲಿ ಮಧ್ಯವರ್ತಿಗಳ ಹಸ್ತಕ್ಷೇಪಕ್ಕೆ ಅವಕಾಶವಿರುವುದಿಲ್ಲ. |
| ಉ | ಸಾರ್ವಜನಿಕ ಕುಂದು ಕೊರತೆಗಳನ್ನು ಕಡಿಮೆ ಮಾಡಲು ಮತ್ತು ಕಂದಾಯ ಕಚೇರಿಗಳಲ್ಲಿ ಸೇವಾ ವಿತರಣೆಯನ್ನು ಸುಧಾರಿಸಲು ಸರ್ಕಾರ ಯಾವ ಕ್ರಮಗಳನ್ನು ಜಾರಿಗೆ ತರಲು ಉದ್ದೇಶಿಸಿದೆ; | ಕಂದಾಯ ದಾಖಲೆಗಳನ್ನು ಗಣಕೀಕರಣ ಗೊಳಿಸಲಾಗುತ್ತಿದ್ದು, ಯಾವುದೇ ವಿಳಂಬವಿಲ್ಲದೇ ಸೇವೆಗೆ ಸಂಬಂಧಿಸಿದಂತೆ ಸ್ವೀಕೃತವಾಗುವ ಮನವಿಗಳನ್ನು ವಿಲೇವಾರಿ ಮಾಡಲಾಗುತ್ತಿದೆ. |

<table>
<tr>
<td>ಊ</td>
<td>ಬೆಂಗಳೂರು ನಗರ ಜಿಲ್ಲಾಧಿಕಾರಿ ಮತ್ತು ಎಸಿ ಕಚೇರಿಗಳಲ್ಲಿ ಸಿಬ್ಬಂದಿ ಕೊರತೆ ಇದೆಯೇ; ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು (ವಿವರಗಳನ್ನು ಒದಗಿಸುವುದು)</td>
<td>ಬೆಂಗಳೂರು ನಗರ ಜಿಲ್ಲಾ ಕಂದಾಯ ಘಟಕದ ಜಿಲ್ಲಾಧಿಕಾರಿಗಳ ಕಛೇರಿ ಮತ್ತು ಉಪ ವಿಭಾಗಾಧಿಕಾರಿಗಳ ಕಛೇರಿಯಗಳಲ್ಲಿ ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಕಂಡಂತೆ ಇರುತ್ತದೆ.<br><br>
<table>
<tr><th>ಕಛೇರಿ</th><th>'ಸಿ' ವೃಂದ</th><th>'ಡಿ' ವೃಂದ</th></tr>
<tr><td>ಜಿಲ್ಲಾಧಿಕಾರಿಗಳು ಬೆಂಗಳೂರು ನಗರ ಜಿಲ್ಲೆ</td><td>16</td><td>07</td></tr>
<tr><td>ಉಪ ವಿಭಾಗಾಧಿಕಾರಿಗಳು, ಬೆಂಗಳೂರು ಉತ್ತರ ಉಪವಿಭಾಗ</td><td>03</td><td>03</td></tr>
<tr><td>ಉಪವಿಭಾಗಾಧಿಕಾರಿಗಳು, ಬೆಂಗಳೂರು ದಕ್ಷಿಣ ಉಪವಿಭಾಗ</td><td>07</td><td>02</td></tr>
<tr><td>ಒಟ್ಟು</td><td>26</td><td>12</td></tr>
</table>
<br>ಬೆಂಗಳೂರು ನಗರ ಜಿಲ್ಲೆಯ ಅರೆ ನ್ಯಾಯಿಕ ಪ್ರಕರಣಗಳನ್ನು ಸುಗಮವಾಗಿ ನಿರ್ವಹಣೆ ಮಾಡಲು ಒಟ್ಟು 8 ವಿಶೇಷ ಜಿಲ್ಲಾಧಿಕಾರಿಗಳನ್ನು ನೇಮಿಸಲಾಗಿದೆ ಮತ್ತು ವಿಶೇಷ ಜಿಲ್ಲಾಧಿಕಾರಿ ರವರಿಗೆ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಹೆಚ್ಚುವರಿಯಾಗಿ ನಿಯೋಜಿಸಲಾಗಿದೆ.<br><br>ಬೆಂಗಳೂರು ನಗರ ಜಿಲ್ಲೆಯ ಉಪ ವಿಭಾಗಾಧಿಕಾರಿಗಳು, ಬೆಂಗಳೂರು ಉತ್ತರ/ದಕ್ಷಿಣ ಉಪ ವಿಭಾಗಕ್ಕೆ ಸಂಬಂಧಿಸಿದ ಅರೆ ನ್ಯಾಯಿಕ ಪ್ರಕರಣಗಳ ನಿರ್ವಹಣೆ ಮಾಡಲು ಒಟ್ಟು 11 ವಿಶೇಷ ಉಪ ವಿಭಾಗಾಧಿಕಾರಿಗಳನ್ನು ನೇಮಿಸಲಾಗಿದೆ ಮತ್ತು ವಿಶೇಷ ಉಪ ವಿಭಾಗಾಧಿಕಾರಿ ರವರುಗಳಿಗೆ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಹೆಚ್ಚುವರಿಯಾಗಿ ನಿಯೋಜಿಸಲಾಗಿದೆ.</td>
</tr>
<tr>
<td>ಋ</td>
<td>ಬೆಂಗಳೂರಿನಲ್ಲಿ ಹೆಚ್ಚಾಗುತ್ತಿರುವ ಕೆಲಸದ ಹೊರೆಯಿಂದಾಗಿ ಎಸಿ ಕಚೇರಿಗಳಲ್ಲಿ ಮೂಲಸೌಕರ್ಯ ಮತ್ತು ಮಾನವ ಶಕ್ತಿಯನ್ನು ಬಲಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ</td>
<td>ಇರುವುದಿಲ್ಲ.</td>
</tr>
</table>

ಸಂಖ್ಯೆ: ಆರ್‌ಡಿ 56 ಎಲ್‌ಜಿಕ್ಯೂ 2026.

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು